ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

1

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: [illegible] ದಿನಾಂಕ : DATE : 17/1/21

# ಪರಿಷತ್ ಗಲಾಟೆ: ಬಿಜೆಪಿ ಶಸ್ತ್ರತ್ಯಾಗ- ರಮೇಶ್

ಬೆಂಗಳೂರು: ವಿಧಾನ ಪರಿಷತ್ ಗಲಾಟೆ ಪ್ರಕರಣದ ತನಿಖೆಗೆ ನೇಮಿಸಿದ್ದ ಸದನ ಸಮಿತಿಗೆ ರಾಜೀನಾಮೆ ನೀಡುವ ಮೂಲಕ ಬಿಜೆಪಿ ಸದಸ್ಯರು ಪಲಾಯನ ಮಾಡಿದ್ದಾರೆ ಎಂದು ವಿಧಾನ ಪರಿಷತ್ ಕಾಂಗ್ರೆಸ್ ಸದಸ್ಯ ಪಿ.ಆರ್. ರಮೇಶ್ ಆರೋಪಿಸಿದ್ದಾರೆ. ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸತ್ಯ ತಿಳಿಯುವ ಮುನ್ನವೇ ಬಿಜೆಪಿ ಶಸ್ತ್ರತ್ಯಾಗ ಮಾಡಿದೆ. ಸದನ ಸಮಿತಿಗೆ ನೇಮಕಗೊಂಡಿದ್ದ ಇಬ್ಬರು ಬಿಜೆಪಿ ಸದಸ್ಯರು ರಾಜೀನಾಮೆ ನೀಡಿದ್ದು ಏಕೆ ? ಘಟನೆ ಬಗ್ಗೆ ಜನರಿಗೆ ಸತ್ಯ ತಿಳಿಸಬೇಕು. ಈ ಹಿನ್ನೆಲೆಯಲ್ಲಿ ಸದನ ಸಮಿತಿ ರಚನೆ ಮಾಡಲಾಗಿದೆ



ಆದರೆ, ಬಿಜೆಪಿ ಸದಸ್ಯರು ಸಮಿತಿಯಿಂದ ಹೊರ ನಡೆದಿದ್ದಾರೆ. ಇದು ಸರಿಯಾದ ನಡೆಯಲ್ಲ. ವಿಧಾನ ಪರಿಷತ್ ಒಳಗೆ ಗಲಾಟೆ ನಡೆದಿರುವುದರಿಂದ ಸದನ ಸಮಿತಿ ಬಿಟ್ಟು ಬೇರೆ ಸಮಿತಿಗಳನ್ನು ರಚನೆ ಮಾಡಲು ಅವಕಾಶವಿಲ್ಲ. ಇದನ್ನು ಕೋರ್ಟ್ ಕೂಡ ಸ್ಪಷ್ಟವಾಗಿ ಹೇಳಿದೆ ಎಂದು ಹೇಳಿದರು. ಸದನದಲ್ಲಿ ನಡೆದ ಅಹಿತಕರ ಘಟನೆಯ ಸರಿ, ತಪ್ಪು ಎನ್ನುವುದು ಸದನದಲ್ಲೇ ತೀರ್ಮಾನ ಆಗಬೇಕು. ಬಿಜೆಪಿ ಸದಸ್ಯರು ಸದನ ಸಮಿತಿಗೆ ಗೌರವ ಕೊಡಬೇಕು. ಆಯನೂರು ಮಂಜುನಾಥ್ ಸೇರಿದಂತೆ ಬಿಜೆಪಿ ಸದಸ್ಯರ ವಾದಕ್ಕೆ ಬೆಲೆ ಇಲ್ಲ. ಸಮಿತಿ ವರದಿ ನೀಡುವ ಮುನ್ನವೇ ಬಿಜೆಪಿ ಸದಸ್ಯರು ಓಡಿ ಹೋಗಿದ್ದಾರೆ. ತಾವು ಮಾಡಿರುವ ತಪ್ಪುಗಳನ್ನ ಮುಚ್ಚಿಕೊಳ್ಳಲು ಹೀಗೆ ಮಾಡಿದ್ದಾರೆ ಎನ್ನುವ ಬಗ್ಗೆ ಅನುಮಾನವಿದೆ ಎಂದು ಹೇಳಿದರು.

**■ ವಿಧಾನ ಪರಿಷತ್ ಒಳಗೆ ಗಲಾಟೆ ನಡೆದಿರುವುದರಿಂದ ಸದನ ಸಮಿತಿ ಬಿಟ್ಟು ಬೇರೆ ಸಮಿತಿಗಳನ್ನು ರಚನೆ ಮಾಡಲು ಅವಕಾಶವಿಲ್ಲ.**

## ಶಸ್ತ್ರ ತ್ಯಾಗ ಮಾಡಿಲ್ಲ

ಪರಿಷತ್ ಗಲಾಟೆ ವಿಚಾರದಲ್ಲಿ ಬಿಜೆಪಿ ಸದಸ್ಯರು ಶಸ್ತ್ರತ್ಯಾಗ ಮಾಡಿಲ್ಲ ಎಂದು ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ಹೇಳಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿ, ಸಭಾಪತಿಗೆ ಸದನ ಸಮಿತಿ ಮಾಡಲು ಅವಕಾಶವೇ ಇಲ್ಲ. ಅವರ ವಿರುದ್ಧ ಅವಿಶ್ವಾಸ ಮಂಡಿಸಿದ್ದೇವೆ. ಹೀಗಿರುವಾಗ ಹೇಗೆ ಸದನ ಸಮಿತಿ ರಚಿಸುತ್ತಾರೆ? ನಮ್ಮ ಪಕ್ಷದ ಸದಸ್ಯರು ಸಮಿತಿಯನ್ನು ಬಹಿಷ್ಕರಿಸಿದ್ದಾರೆ. ಸದನ ಸಮಿತಿ ರಚಿಸುವಾಗ ಆಯಾ ಪಕ್ಷಗಳ ಅಭಿಪ್ರಾಯ ಪಡೆಯಬೇಕು. ಆ ನಂತರ ಸದಸ್ಯರನ್ನು ಸಮಿತಿಗೆ ಆಯ್ಕೆ ಮಾಡಬೇಕು. ಈ ವಿಚಾರದಲ್ಲಿ ಸಭಾಪತಿಗಳು ಏಕಪಕ್ಷೀಯ ತೀರ್ಮಾನ ಕೈಗೊಂಡಿದ್ದಾರೆ. ಮತ್ತೆ ಕೋರಂ ಇಲ್ಲದೆ ಅದೇನು ಸಭೆ ಮಾಡುತ್ತಾರೋ ನೋಡೋಣ ಎಂದು ಹೇಳಿದರು.

